# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 33 | Pages. 2 | Date: 31-12-2025, WEDNESDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 33 - ಪುಟಗಳು : 2 | 31-12-2025 | ಬುಧವಾರ | Ph: 8762954248 | ದರ : ₹1


# ಜಿಲ್ಲಾದ್ಯಂತ ಶ್ರದ್ಧಾ ಭಕ್ತಿಯ ವಿಷ್ಣುನಾಮಸ್ಮರಣೆ

## ವೈಕುಂಠ ಏಕಾದಶಿಗೆ ಹರಿದು ಬಂದ ಭಕ್ತರು | ರಾಜಕೀಯ ನಾಯಕರಿಂದ ದೇವರ ದರ್ಶನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ವೈಕುಂಠ ಏಕಾದಶಿ ಅಂಗವಾಗಿ ನಗರ ಸೇರಿ ಜಿಲ್ಲಾದ್ಯಂತ ವಿವಿಧ ದೇವಸ್ಥಾನಗಳಲ್ಲಿ ಪೂಜೆ ಪುನಸ್ಕಾರಗಳು ನೆರವೇರಿದವು.

ಮಹಾರಾಜ ಪಾರ್ಕ್ ಸಮೀಪದ ಸೀತಾರಾಮಾಂಜನೇಯ ದೇವಸ್ಥಾನ, ಪಾಂಡುರಂಗ ದೇವಾಲಯ, ಗುರು ರಾಘವೇಂದ್ರ ದೇಗುಲ, ಚನ್ನರಾಯಪಟ್ಟಣದ ಲಕ್ಷ್ಮಿ ವೆಂಕಟರಮಣ ದೇವಾಲಯ, ಅರಸೀಕೆರೆಯ ಮಾಲೆಕಲ್ ತಿರುಪತಿ ಸೇರಿ ವಿವಿಧ ದೇವಸ್ಥಾನದಲ್ಲಿ ಧಾರ್ಮಿಕ ಕೈಂಕರ್ಯಗಳು ಶ್ರದ್ಧಾ ಭಕ್ತಿಯಿಂದ ನಡೆದವು.

ಸಂಸದ ಶ್ರೇಯಸ್ ಪಟೇಲ್, ಶಾಸಕ ಹೆಚ್.ಪಿ. ಸ್ವರೂಪ್, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸೇರಿದಂತೆ ಅನೇಕ ಗಣ್ಯರು ದೇವರ ದರ್ಶನ ಪಡೆದು ಪೂಜೆಯಲ್ಲಿ ಭಾಗವಹಿಸಿದರು.



ಶಾಸಕ ಹೆಚ್.ಪಿ. ಸ್ವರೂಪ್ ಮಾತನಾಡಿ, ವೈಕುಂಠ ಏಕಾದಶಿ ಅಂಗವಾಗಿ ಪ್ರತಿವರ್ಷದಂತೆ ಈ ವರ್ಷವೂ ಶ್ರೀ ಸೀತಾರಾಮಾಂಜನೇಯ ದೇವಸ್ಥಾನದಲ್ಲಿ ಅದ್ದೂರಿಯಾಗಿ ಆಚರಣೆ ಮಾಡಲಾಗುತ್ತಿದೆ. ಬೆಳಗ್ಗಿನಿಂದ ಸಂಜೆ ವರೆಗೂ ಸಾವಿರಾರು ಸಂಖ್ಯೆಯಲ್ಲಿ ಭಕ್ತಾಧಿಗಳು ಆಗಮಿಸಿ ದೇವರ ದರ್ಶನ ಪಡೆದು ಪುನೀತರಾಗಿದ್ದಾರೆ. ದೇವಾಲಯಕ್ಕೆ ಬಂದ ಎಲ್ಲಾ ಭಕ್ತರಿಗೆ ಲಾಡು ರೂಪದಲ್ಲಿ ಪ್ರಸಾದ ವಿತರಿಸಲಾಗುತ್ತಿದೆ ಎಂದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಮಾತನಾಡಿ, ಜಿಲ್ಲೆಯ ಸಮಸ್ತ ಜನತೆಗೆ ವೈಕುಂಠ ಏಕಾದಶಿಯ ಶುಭಾಶಯ ತಿಳಿಸಿದರು. ಮಂಗಳವಾರ ನಗರ ಸುತ್ತಾಟ (ಸಿಟಿ ರೌಂಡ್ಸ್) ವೇಳೆ ಶ್ರೀ ಸೀತಾರಾಮಾಂಜನೇಯ ದೇವಸ್ಥಾನಕ್ಕೆ ಭೇಟಿ ನೀಡಿದ್ದು, ವೈಕುಂಠ ಏಕಾದಶಿ ಅಂಗವಾಗಿ ಬೆಳಗ್ಗಿನಿಂದಲೇ ನೂರಾರು ಭಕ್ತರು ಸರದಿ ಸಾಲಿನಲ್ಲಿ ನಿಂತು ಶಿಸ್ತಿನಿಂದ ದೇವರ ದರ್ಶನ ಪಡೆಯುತ್ತಿರುವುದು ಮನಸಿಗೆ ಸಂತೋಷ ತಂದಿದೆ ಎಂದರು.

ನಮ್ಮ ಸಂಪ್ರದಾಯ, ಸಂಸ್ಕೃತಿ ಹಾಗೂ ಭಕ್ತಿಯ ಮಾರ್ಗ ಉಳಿಸಿಕೊಂಡು



ಹೋಗುವ ಇಂತಹ ಆಚರಣೆಗಳು ಮುಂದಿನ ತಲೆಮಾರಿಗೆ ದಾರಿ ತೋರಿಸುತ್ತವೆ ಎಂದು ಶ್ಲಾಘಿಸಿದರು.

ಸೀತಾ ರಾಮಾಂಜನೇಯ ದೇವಸ್ಥಾನ ಸೇವಾ ಸಮಿತಿ ಅಧ್ಯಕ್ಷ ಶ್ರೀಕಾಂತ್, ಕಾರ್ಯದರ್ಶಿ ಶ್ರೀನಿವಾಸ್ ಮೂರ್ತಿ, ಖಜಾಂಚಿ ಅನಂತರಾಮು, ಗಿರೀಶ್, ನಿರ್ದೇಶಕರಾದ ಅಶ್ವತ್, ರಕ್ಷಿತ್, ವೆಂಕಟಸುಬ್ಬಯ್ಯ, ನಟರಾಜು ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಚನ್ನರಾಯಪಟ್ಟಣ ವರದಿ

ಪಟ್ಟಣ ಸೇರಿದಂತೆ ಗಿರಿಕ್ಷೇತ್ರದ ಶ್ರೀ ಲಕ್ಷ್ಮಿ ವೆಂಕಟೇಶ್ವರ ಸ್ವಾಮಿ ಸನ್ನಿಧಿ, ಬೂಕದ ಶ್ರೀ ರಂಗನಾಥ ಸ್ವಾಮಿ ಸನ್ನಿಧಿ ಹಾಗೂ ತಾಲ್ಲೂಕು ವ್ಯಾಪ್ತಿಯ ವಿವಿಧ ದೇಗುಲಗಳಲ್ಲಿ ವೈಕುಂಠ ಏಕಾದಶಿ ಆಚರಣೆಯು ಮಂಗಳವಾರ ವೈಭವದಿಂದ ನೆರವೇರಿತು.

ಹಿನ್ನೆಲೆಯಲ್ಲಿ ದೇಗುಲಗಳಿಗೆ ಹಸಿರು ಚಪ್ಪರ ಹಾಕಲಾಗಿದ್ದು ತಳಿರು ತೋರಣಗಳಿಂದ ಸಿಂಗರಿಸಲಾಗಿತ್ತು. ಶ್ರೀ ವೆಂಕಟೇಶ್ವರ ಸ್ವಾಮಿ ಮೂರ್ತಿಯನ್ನು ಒಡವೆ-ವಸ್ತ್ರ ಹಾಗೂ ವಿವಿಧ ಬಗೆಯ ಪುಷ್ಪಗಳಿಂದ ವಿಶೇಷವಾಗಿ ಅಲಂಕರಿಸಲಾಗಿತ್ತು.

ಮುಂಜಾನೆ 5.30 ರಿಂದಲೇ ದೇಗುಲಗಳಲ್ಲಿ ವಿಶೇಷ ಪೂಜಾ ವಿಧಿ ವಿಧಾನಗಳು ಆರಂಭವಾಗಿ ಭಕ್ತರ ಹಣ್ಣು-ಕಾಯಿ ಅರ್ಪಿಸಿ ಗಂಧ-ಕರ್ಪೂರ ಬೆಳಗಿಸಿದರು. ಸರದಿ ಸಾಲಿನಲ್ಲಿ ನಿಂತು ಗೋವಿಂದ ನಾಮ ಜಪಿಸುತ್ತ ದೇವರ ದರ್ಶನ ಪಡೆದು ಭಕ್ತಿ ಭಾವದಲ್ಲಿ ತೇಲಿದರು. ಮಹಾಮಂಗಳಾರತಿ ಬೆಳಗಿಸಿದ ನಂತರ ಪ್ರಸಾದ ವಿನಿಯೋಗ ನಡೆಯಿತು.

ಶಾಸಕ ಸಿ.ಎನ್.ಬಾಲಕೃಷ್ಣ ಅವರು ತಾಲ್ಲೂಕು ವ್ಯಾಪ್ತಿಯ ವಿವಿಧ ದೇಗುಲಗಳಿಗೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು. ಗಿರಿಕ್ಷೇತ್ರದ ಶ್ರೀ ಲಕ್ಷ್ಮಿ ವೆಂಕಟೇಶ್ವರ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿದರು.

ಬಳಿಕ ಅವರು ಮಾತನಾಡಿ, ಪ್ರತಿ ಗ್ರಾಮಗಳಲ್ಲಿಯೂ ಧಾರ್ಮಿಕ ಕೇಂದ್ರಗಳು ಹೆಚ್ಚಿದಂತೆಲ್ಲ ಸನಾತನ ಧರ್ಮ ಉಳಿದು ಬೆಳೆಯಲು ಪೂರಕವಾಗಿರುತ್ತದೆ. ಧರ್ಮ ಉಳಿದರೆ ಮಾತ್ರ ನಮ್ಮೆಲ್ಲರ ಬದುಕು ಸಾರ್ಥಕವಾಗಲು ಸಾಧ್ಯ ಎಂದರು.

ಶ್ರೀ ಲಕ್ಷ್ಮಿ ವೆಂಕಟೇಶ್ವರ ಸ್ವಾಮಿ ದೇಗುಲ ನಿರ್ಮಾಣಕ್ಕೆ 10 ಲಕ್ಷ ರೂ. ಸಹಕಾರ ನೀಡಲಾಗಿದೆ. ಗಿರಿಕ್ಷೇತ್ರ ದೇಗುಲದ ಬಳಿಯಿಂದ ಮಸಕನಹಳ್ಳಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು ಅಭಿವೃದ್ಧಿಗೊಳಿಸಲಾಗುವುದು ಎಂದು ತಿಳಿಸಿದರು.

ನುಗ್ಗೇಹಳ್ಳಿ ಕೃಷಿಪತ್ತಿನ ಸಹಕಾರ ಸಂಘದ ಮಾಜಿ ಅಧ್ಯಕ್ಷ ಸಂಪತ್ ಕುಮಾರ್, ಬಸವರಾಜ್, ಮಂಜುನಾಥ್, ಆರು ಗ್ರಾಮಗಳ ಬುಡಕಟ್ಟಿನ ಭಕ್ತರು ಪಾಲ್ಗೊಂಡಿದ್ದರು. ಗಿರಿಕ್ಷೇತ್ರದಲ್ಲಿ ನಡೆದ ವೈಕುಂಠ ಏಕಾದಶಿ ಆಚರಣೆಯಲ್ಲಿ ಸೋಮಗಳ ಕುಣಿತ ನೋಡುಗರ ಗಮನ ಸೆಳೆಯಿತು.



### ಚನ್ನಕೇಶವ ಸ್ವಾಮಿಯ ಬೆಳ್ಳಿ ರಥೋತ್ಸವ:

ಹಿರೀಸಾವೆ ಗ್ರಾಮದಲ್ಲಿ ವೈಕುಂಠ ಏಕಾದಶಿ ಪ್ರಯುಕ್ತ ಚನ್ನಕೇಶವ ನೈಟ್ ಚಾರ್ಟ್ ವತಿಯಿಂದ ಶ್ರೀ ಚನ್ನಕೇಶವ ಸ್ವಾಮಿಯ ಬೆಳ್ಳಿ ರಥೋತ್ಸ ವ ವಿಜೃಂಭಣೆಯಿಂದ ನಡೆಯಿತು. ಚನ್ನಕೇಶವ ದೇಗುಲಕ್ಕೆ ಹಸಿರು ಚಪ್ಪರ ಹಾಕಲಾಗಿದ್ದು ತಳಿರು ತೋರಣಗಳಿಂದ ಸಿಂಗರಿಸಲಾಗಿತ್ತು. ಶ್ರೀ ಚನ್ನಕೇಶವ ಉತ್ಸವ ಮೂರ್ತಿಗೆ ವಿಶೇಷ ಅಲಂಕಾರ ಮಾಡಲಾಗಿದ್ದು ವಿಶೇಷ ಪೂಜಾ ವಿಧಿ ವಿಧಾನಗಳು ನೆರವೇರಿದವು. ಅಲಂಕೃತ ಶ್ರೀ ಚನ್ನಕೇಶವ ಸ್ವಾಮಿಯನ್ನು ಬೆಳ್ಳಿ ರಥದ ಮೇಲೆ ಪ್ರತಿಷ್ಠಾಪಿಸಿ ಮಂಗಳವಾದ್ಯದೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು. ಸಂಸ್ಥೆಯ ಅಧ್ಯಕ್ಷ ದಿನೇಶ್, ಉಪಾಧ್ಯಕ್ಷ ವೆಂಕಟೇಶ್, ಸದಸ್ಯರಾದ ಗಿರೀಶ್, ಅಣ್ಣಯ್ಯ, ಹರೀಶ್, ಶೇಖರ್, ಶಿವರಾಜ್, ರವಿ, ಪಾನಿಪುರಿ ನಾಗೇಶ್, ಸಿದ್ದರಾಜು, ಕೋಮಲ್ ಪಾಟೀಲ್, ಶೇಖರ್ ಹಾಗೂ ಇತರರು ಇದ್ದರು.

## ಸರ್ಕಾರಿ ಶಾಲೆ ಉಳಿಸಿಕೊಳ್ಳುವುದು ಗ್ರಾಮಸ್ಥರ ಕರ್ತವ್ಯ : ಸಿ.ಎನ್. ಬಾಲಕೃಷ್ಣ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಗ್ರಾಮಸ್ಥರ ಸಹಕಾರವಿದ್ದಲ್ಲಿ ಮಾತ್ರ ಸರ್ಕಾರಿ ಶಾಲೆಗಳು ಉಳಿಯಲು ಸಾಧ್ಯ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ಮಸಕನಹಳ್ಳಿ ಗ್ರಾಮದಲ್ಲಿ 2022-23ನೇ ಸಾಲಿನ ವಿವೇಕ ಯೋಜನೆಯಡಿ 13.90 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಶಾಲಾ ಕಟ್ಟಡ ಉದ್ಘಾಟಿಸಿ ಮಾತನಾಡಿ, ತಮ್ಮ ಮಕ್ಕಳನ್ನು ಸೇರಿಸುವ ಮೂಲಕ ಸರ್ಕಾರಿ ಶಾಲೆಗಳನ್ನು ಉಳಿಸಿಕೊಳ್ಳುವುದು ಗ್ರಾಮಸ್ಥರ ಕರ್ತವ್ಯ ಎಂದರು. ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವ ಮೂಲಕ ಮಕ್ಕಳ ಶೈಕ್ಷಣಿಕ ಭವಿಷ್ಯಕ್ಕೆ ಜೀವ ತುಂಬಬೇಕಿದೆ. ಶಾಲೆ ಎಂದರೆ ಮಕ್ಕಳ ಭವಿಷ್ಯ ರೂಪಿಸುವ ಕೇಂದ್ರವಾಗಿದೆ. ದೇಗುಲದ ಹಾಗೂ ಶಾಲೆಯ ಗಂಟೆ ಮೊಳಗಿದರೆ ಮಾತ್ರ ಗ್ರಾಮ ಪ್ರಗತಿ ಕಾಣಲು ಸಾಧ್ಯ ಎಂದರು.

ಗ್ಯಾರಂಟಿ ಯೋಜನೆಗಳ ನಿರ್ವಹಿಸುವ ಬರದಲ್ಲಿ ಸರ್ಕಾರವು ಅಗತ್ಯ ಅನುದಾನ ಬಿಡುಗಡೆ ಮಾಡುವಲ್ಲಿ ವಿಳಂಬವಾಗುತ್ತಿದೆ. ಅನುದಾನಗಳ ಕೊರತೆ ಪರಿಣಾಮ ಅಭಿವೃದ್ಧಿಗೆ ಸಮಸ್ಯೆಯಾಗುತ್ತಿದೆ. ಸದ್ಯ ಲಭ್ಯವಾಗುವ ಅನುದಾನ ಬಳಕೆ ಮಾಡಿಕೊಂಡು ಸಾಕಷ್ಟು ಅಭಿವೃದ್ಧಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಂಗಳಮ್ಮ, ಮಾಜಿ ಅಧ್ಯಕ್ಷ ರಾಜಣ್ಣ, ಶಿವನಂಜೇಗೌಡ, ಬಿಳಿಕೆರೆ ರಂಗೇಗೌಡ, ಪೃಥ್ವಿ ಕುಮಾರ್, ಮಾಜಿ ಸದಸ್ಯ ಸುರೇಶ್, ಪ್ರಮುಖರಾದ ಕುಮಾರಸ್ವಾಮಿ, ಮಂಜುನಾಥ್, ನಿವೃತ್ತ ಉಪನ್ಯಾಸಕ ಶಿವರಾಜ್, ಪಿಡಿಒ ಕಿರಣ್, ಆನಂದ್ ಕುಮಾರ್, ಮುಖ್ಯ ಶಿಕ್ಷಕಿ ಪ್ರೇಮ ಕುಮಾರಿ, ಸಹ ಶಿಕ್ಷಕರಾದ ಡಿ.ಆರ್.ನರಸಿಂಹಶೆಟ್ಟಿ, ವರಲಕ್ಷ್ಮೀ ಇತರರಿದ್ದರು.

## ಸುಂದರ ಸಕಲೇಶಪುರದಲ್ಲಿ ಬೀದಿ ಬದಿ ವರ್ತಕರಿಗೂ ಆದ್ಯತೆ: ಸಿಮೆಂಟ್ ಮಂಜು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಪಟ್ಟಣದ ಸೌಂದರ್ಯ ವೃದ್ಧಿ, ಸಾರ್ವಜನಿಕರ ಸುರಕ್ಷತೆ ಹಾಗೂ ಪಾದಚಾರಿಗಳ ಸುಗಮ ಸಂಚಾರದ ಹಿತದೃಷ್ಟಿಯಿಂದ ಪಟ್ಟಣದಲ್ಲಿ ಫುಟ್‌ಪಾತ್ ತೆರವು ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಸಕಲೇಶಪುರ, ಆಲೂರು ಹಾಗೂ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ರಸ್ತೆ ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿವೆ. ಒಂದು ವರ್ಷದಲ್ಲಿ 34 ಮಂದಿ ಅಪಘಾತದಲ್ಲಿ ಮೃತಪಟ್ಟಿದ್ದಾರೆ. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಅವರೊಂದಿಗೆ ಚರ್ಚಿಸಿ, ಪುರಸಭೆ ಮೂಲಕ ಫುಟ್‌ಪಾತ್ ತೆರವು ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದರು.

ಬೀದಿ ಬದಿ ವ್ಯಾಪಾರಿಗಳ ಜೀವನೋಪಾಯಕ್ಕೆ ಧಕ್ಕೆಯಾಗದಂತೆ ಕ್ರಮ ಕೈಗೊಳ್ಳಲಾಗುತ್ತಿದ್ದು, ಸಕಲೇಶಪುರ ಹಳೆ ಬಸ್ ನಿಲ್ದಾಣ ಸೇರಿ ವಿವಿಧ ಭಾಗಗಳಲ್ಲಿ ಫುಡ್ ಕೋರ್ಟ್, ಹಣ್ಣಿನಂಗಡಿ, ಹೂವು ವ್ಯಾಪಾರಕ್ಕೆ ಅನುವು ಮಾಡಿಕೊಡಲಾಗುವುದು. ಅಗತ್ಯ ಅನುದಾನ ಮೀಸಲಿಟ್ಟು ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗೆ ಸಲ್ಲಿಸಲಾಗುತ್ತಿದ್ದು, ಅನುಮೋದನೆ ದೊರಕಿದ ಬಳಿಕ ಕಾಮಗಾರಿ ಆರಂಭಿಸಲಾಗುವುದು ಎಂದರು.

### ವ್ಯಾಪಾರಿಗಳಿಗೆ ಅನ್ಯಾಯವಾಗಲ್ಲ

ಹಿಂದಿನಿಂದಲೂ ಲೈಸೆನ್ಸ್ ಹೊಂದಿ ವ್ಯಾಪಾರ ನಡೆಸುತ್ತಿದ್ದವರಿಗೆ ಪ್ರಥಮ ಆದ್ಯತೆ ನೀಡಲಾಗುವುದು. ಪುರಸಭೆ ಈಗಾಗಲೇ ವ್ಯಾಪಾರಿಗಳ ವಿವರಗಳನ್ನು ಸಂಗ್ರಹಿಸಿದ್ದು, ಮಳಿಗೆಗಳು ಸಿದ್ಧವಾದ ತಕ್ಷಣ ಆದ್ಯತೆಯ ಮೇರೆಗೆ ಹಸ್ತಾಂತರಿಸಲಾಗುವುದು ಎಂದು ಭರವಸೆ ನೀಡಿದರು. ತಾತ್ಕಾಲಿಕವಾಗಿ ತೆರವುಗೊಂಡ ವ್ಯಾಪಾರಿಗಳು ಹಳೆ ತಾಲೂಕು ಕಚೇರಿ ಸಭಾಂಗಣದ ಆವರಣದಲ್ಲಿ ವ್ಯಾಪಾರ ನಡೆಸಬಹುದಾಗಿದೆ.

ನಗರದ ಕಿರಿದಾದ ರಸ್ತೆಗಳು ಹಾಗೂ ಹೆಚ್ಚುತ್ತಿರುವ ವಾಹನ ದಟ್ಟಣೆಯಿಂದ ಉಂಟಾಗಿರುವ ಸಮಸ್ಯೆ ನಿವಾರಣೆಗೆ ಎನ್‌ಎಚ್‌ಐ ಮೂಲಕ ರಸ್ತೆ ತೆರೆಯುವ ಕಾರ್ಯ ಪ್ರಗತಿಯಲ್ಲಿದೆ. ಸಾರ್ವಜನಿಕ ಸುರಕ್ಷತೆ, ವ್ಯಾಪಾರಸ್ಥರ ಹಿತ ಹಾಗೂ ನಗರ ಸಂಚಾರ ವ್ಯವಸ್ಥೆ ಈ ಮೂರನ್ನೂ ಸಮತೋಲನದಲ್ಲಿಟ್ಟುಕೊಂಡು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಶಾಸಕರು ಹೇಳಿದರು. ಒಂದೂವರೆ ತಿಂಗಳೊಳಗೆ ವ್ಯವಸ್ಥಿತ ಮಳಿಗೆಗಳ ನಿರ್ಮಾಣ ಆರಂಭಿಸಿ, ವ್ಯಾಪಾರಿಗಳನ್ನು ಶಾಶ್ವತವಾಗಿ ಸ್ಥಳಾಂತರಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

## ಡಾ. ಗುರುರಾಜ ಹೆಬ್ಬಾರ್ ಜನ್ಮದಿನ ಅಂಗವಾಗಿ ವಿವಿಧ ಕಾರ್ಯಕ್ರಮ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಡಾ.ಗುರುರಾಜ್ ಹೆಬ್ಬಾರ್ ಅವರ ಹುಟ್ಟುಹಬ್ಬದ ಪ್ರಯುಕ್ತ ಜ. 1ರಂದು ಸಮಾಜ ಮುಖಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಭಾರತೀಯ ರೆಡ್‌ಕ್ರಾಸ್ ಸಭಾಪತಿ ಹೆಚ್.ಪಿ.ಮೋಹನ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಜ.1 ರಂದು ನಗರದ ಬೈಪಾಸ್ ಬಳಿ ಇರುವ ಚೈತನ್ಯ ಮಂದಿರ(ವೃದ್ಧಾಶ್ರಮ)ದಲ್ಲಿ ಕಾರ್ಯಕ್ರಮ ನಡೆಯಲಿದ್ದು, ದೇಹದಾನ, ನೇತ್ರದಾನ ನೋಂದಣಿ ಕಾರ್ಯಕ್ರಮ ನಡೆಯಲಿದೆ ಎಂದರು.

ಕಾರ್ಯಕ್ರಮವನ್ನು ಸ್ಥಳೀಯ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್ ಉದ್ಘಾಟಿಸುವರು. ರಾಜೀವ್ ಗಾಂಧಿ ಆರೋಗ್ಯ ವಿವಿ ವಿಶ್ರಾಂತ ನಿರ್ದೇಶಕರಾದ ಡಾ.ಕೆ.ಪಿ.ಪುತ್ತೂರಾಯ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಎಂದರು. ಕಾಮಧೇನು ಸಹಕಾರಿ ವೃದ್ಧಾಶ್ರಮದ ಅಧ್ಯಕ್ಷ ಎಂ.ಮಾಧವ ಶೆಣೈ ಅಧ್ಯಕ್ಷತೆ ವಹಿಸುವರು. ಈಗಾಗಲೇ ಎಂಸಿಇ, ಶ್ರೀ ಆದಿಚುಂಚನಗಿರಿ ಮಠ, ಇಂದು ಹೇಮಾವತಿ ಪ್ರತಿಮೆ ಹಾಗೂ ನಾಳೆ ಹಾಸನ ವಿವಿಯಲ್ಲಿ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದರು.

ಗುರುರಾಜ್ ಹೆಬ್ಬಾರ್ ಅವರು ಬದುಕಿದ್ದಾಗ ಹಲವು ಸಮಾಜ ಮುಖಿ ಕಾರ್ಯ ಮಾಡಿದ್ದರು. ಅದನ್ನು ಮುಂದುವರಿಸಿ, ಇತರರಿಗೂ ತಿಳಿಸಬೇಕು ಎಂಬ ಉದ್ದೇಶದಿಂದ ಅವರ ಜನ್ಮ ದಿನದಂದು ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

### ಸಾಧಕರಿಗೆ ಸನ್ಮಾನ

ಹೆಬ್ಬಾರ್ ಅವರ ಸ್ಮರಣಾರ್ಥ ಸೇವಾ ಪ್ರಶಸ್ತಿಯನ್ನು ವೈದ್ಯಕೀಯ ಕ್ಷೇತ್ರದಿಂದ ಡಾ.ವಿಜಯಲಕ್ಷ್ಮಿ ಐ ಬಾಳೆಕುಂದ್ರಿ, ಸಮಾಜ ಸೇವಾಕ್ಷೇತ್ರದಿಂದ ಆರತಿ ಕೆ.ಟಿ. ಪ್ರಶಸ್ತಿ ನೀಡಲಾಗುವುದು. ಕುಮಾರಿ ಸಂಸ್ಕೃತಿಗೆ ಪ್ರತಿಭಾ ಪುರಸ್ಕಾರ, 2025-26ನೇ ಜಿಲ್ಲಾ ಮಟ್ಟದ ಅತ್ಯುತ್ತಮ ಸ್ವಯಂ ಸೇವಾ ಪ್ರಶಸ್ತಿಯನ್ನು ಚಂದನ್ ಕೆ.ಎಸ್.ಅವರಿಗೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಈ ಎಲ್ಲ ಕಾರ್ಯಕ್ರಮಗಳಿಗೆ ಕಾಮಧೇನು ಸಹಕಾರಿ ವಿದ್ಯಾಶ್ರಮ, ಡಾ.ಗುರುರಾಜ್ ಹೆಬ್ಬಾರ್ ಮೆಮೋರಿಯಲ್ ಚಾರಿಟಬಲ್ ಟ್ರಸ್ಟ್, ಜನಕಲ್ಯಾಣ ರೀಸರ್ಚ್ ಅಂಡ್ ಚಾರಿಟಬಲ್ ಟ್ರಸ್ಟ್, ಸಂಜೀವಿನಿ ಸಹಕಾರಿ ಆಸ್ಪತ್ರೆಯವರು ಸಹಕಾರ ನೀಡಿದ್ದಾರೆ ಎಂದರು.

ಹೆಬ್ಬಾರ್ ಅವರ ಅಭಿಮಾನಿಗಳು ಹಾಗೂ ನಗರದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಪ್ರೊ. ಲಕ್ಷ್ಮಿನಾರಾಯಣ, ಡಾ.ಪ್ರತಿಭಾ ಜಿ., ಗಣೇಶ್, ಮಾಧವ ಶೆಣೈ ಮೊದಲಾದವರಿದ್ದರು.

## ಪತ್ರಕರ್ತರ ಹೆಸರಲ್ಲಿ ಲಂಚ ಸ್ವೀಕಾರ ಆರೋಪ: ತನಿಖೆಗೆ ಆಗ್ರಹ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಆಲೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಇತ್ತೀಚೆಗೆ ಅಕ್ರಮ ಅಕ್ಕಿ ಸಾಗಾಟ ಲಾರಿ ಮಾಲೀಕರಿಂದ ಪತ್ರಕರ್ತರು ಲಂಚ ಸ್ವೀಕರಿಸಿದ್ದಾರೆಂಬ ಗಂಭೀರ ಆರೋಪ ಕೇಳಿಬಂದಿದ್ದು ಸಮಗ್ರ ತನಿಖೆ ಮೂಲಕ ಸತ್ಯಾಂಶ ಬಯಲಿಗೆಳೆಯಬೇಕೆಂದು ಜಿಲ್ಲಾ ಪತ್ರಕರ್ತರ ಸಂಘದಿಂದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ ಅವರಿಗೆ ಮಂಗಳವಾರ ದೂರು ನೀಡಲಾಯಿತು.

ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ ಅವರ ನೇತೃತ್ವದಲ್ಲಿ ಎಸ್ಪಿ ಕಚೇರಿಗೆ ತೆರಳಿದ್ದ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಮನವಿ ಸಲ್ಲಿಸಿದರು.

ಅಕ್ರಮವಾಗಿ ಅಕ್ಕಿ ಸಾಗಣೆ ಮಾಡುತ್ತಿದ್ದ ಲಾರಿಯನ್ನು ಆಲೂರು ಪೊಲೀಸರು ವಶಕ್ಕೆ ಪಡೆದಿರುವುದು ಸರಿಯಷ್ಟೆ. ಆದರೆ ಅಕ್ಕಿ ಸಾಗಿಸುತ್ತಿದ್ದ ಲಾರಿಯವರಿಂದ ಪತ್ರಕರ್ತರ ಹೆಸರಿನಲ್ಲಿ ಹಣ ವಸೂಲಿ ಮಾಡಿದ್ದಾರೆಂಬ ವಿಚಾರ ಹೆಚ್ಚು ಚರ್ಚೆಯಾಗುತ್ತಿದೆ. ಈ ಬೆಳವಣಿಗೆಯಿಂದಾಗಿ ಹಾಸನ ಜಿಲ್ಲೆಯ ಪತ್ರಕರ್ತರ ಕುರಿತು ಸಾರ್ವಜನಿಕ ವಲಯದಲ್ಲಿ ಅನುಮಾನ ಮೂಡುವಂತಹ ಪರಿಸ್ಥಿತಿ ಎದುರಾಗಿದೆ. ಇದರಿಂದ ಪತ್ರಕರ್ತರು ಕಳಂಕ ಹೊತ್ತುಕೊಳ್ಳುವಂತಾಗಿದೆ.

ಈ ವಿಚಾರದಲ್ಲಿ ಪತ್ರಕರ್ತರು ಮುಜುಗರಕ್ಕೆ ಒಳಗಾಗುವ ಪರಿಸ್ಥಿತಿ ಇರುವುದರಿಂದ ತಾವು ದಯಮಾಡಿ ಈ ಪ್ರಕರಣದ ಸಂಬಂಧ ಸಮಗ್ರ ತನಿಖೆ ನಡೆಸಿ, ಅಕ್ರಮದಲ್ಲಿ ಭಾಗಿಯಾಗಿರುವವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳುವ ಮೂಲಕ ಅಂತಹ ವಸೂಲಿಕೋರರ ಮೇಲೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಕೆಂಚೇಗೌಡರು ಎಸ್ಪಿ ಅವರಲ್ಲಿ ಮನವಿ ಮಾಡಿದರು.

ಇದೇ ವೇಳೆ ತನಿಖೆಗೆ ಎಲ್ಲ ರೀತಿಯ ಸಹಕಾರ ನೀಡುವುದಾಗಿ ಸಂಘದ ಅಧ್ಯಕ್ಷರು ತಿಳಿಸಿದರು.

ದೂರು ಸ್ವೀಕರಿಸಿದ ನಂತರ ಮಾತನಾಡಿದ ಎಸ್ಪಿ ಅವರು, ಈ ಸಂಬಂಧ ಹೊಸದಾಗಿ ಎಫ್‌ಐಆರ್ ದಾಖಲು ಮಾಡಬೇಕು. ಪತ್ರಕರ್ತರ ಬಗ್ಗೆ ಕೇಳಿ ಬಂದಿರುವ ಆರೋಪ ಸಂಬಂಧ ತನಿಖೆ ನಡೆಸಿ ಎಂದು ಲಿಖಿತ ದೂರು ನೀಡಿರುವುದು ಇದೇ ಮೊದಲು ಮತ್ತು ಒಳ್ಳೆಯ ಬೆಳವಣಿಗೆ ಎಂದರು.

ಇದರಿಂದ ಸುಳ್ಳು ಪ್ರಚಾರ ಮಾಡುವುದು, ಯಾರೋ ಒಬ್ಬರನ್ನು ಗುರಿಯಾಗಿಸಿ ವರದಿ ಮಾಡುವುದು ತಪ್ಪಲಿದೆ. ಈ ವಿಚಾರದಲ್ಲಿ ನಿಷ್ಪಕ್ಷಪಾತ ತನಿಖೆ ನಡೆಸುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಕೆ.ಜಿ.ಸುರೇಶ್, ಕಾರ್ಯದರ್ಶಿಗಳಾದ ಕೆ.ಎಂ.ಹರೀಶ್, ಕುಶ್ವಂತ್, ಖಜಾಂಚಿ ಪ್ರಕಾಶ್ ಟಿವಿ 5, ಕಾರ್ಯಕಾರಿ ಸಮಿತಿ ಸದಸ್ಯರಾದ ನಟರಾಜ್, ಶರಣ್ ಬಾಳ್ಳುಗೋಪಾಲ್, ಕೃಷ್ಣ ಇಬ್ಬೀಡು, ಶರತ್ ಹೆಚ್.ಆರ್. ಮೋಹನ್ ಕೆ.ಎಂ. ಮತ್ತು ಸಚಿನ್ ಇದ್ದರು.

# ನಾಳೆ ಅಮರಶಿಲ್ಪಿ ಜಕಣಾಚಾರಿ ಜಯಂತಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಅಮರಶಿಲ್ಪಿ ಜಕಣಾಚಾರಿ ಅವರ ಸಂಸ್ಮರಣಾ ದಿನಾಚರಣೆಯನ್ನು ಜ.1 ರಂದು ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಲಾಗಿದೆ ಎಂದು ಜಿಲ್ಲಾ ವಿಶ್ವಕರ್ಮ ಸಮಾಜದ ಅಧ್ಯಕ್ಷ ಹೆಚ್.ವಿ.ಹರೀಶ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಅಂದು ಬೆಳಿಗ್ಗೆ 11 ಗಂಟೆಗೆ ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮಕ್ಕೆ ಶಿಲ್ಪಕಲಾಸಕ್ತರು, ವಿಶ್ವಕರ್ಮ ಸಮಾಜದ ಬಾಂಧವರು ಮತ್ತು ಸಮಸ್ತ ನಾಗರಿಕರು ಆಗಮಿಸಬೇಕೆಂದು ವಿನಂತಿಸಿದರು.

ಬೆಳಿಗ್ಗೆ 10 ಗಂಟೆಗೆ ಹಾಸನ-ಬೇಲೂರು ರಸ್ತೆಯ ಉದ್ದೂರು ಗ್ರಾಮದ ರಿಂಗ್ ರಸ್ತೆ ಪ್ರಾರಂಭದ ವೃತ್ತಕ್ಕೆ ಹಾಸನ ಮಹಾನಗರಪಾಲಿಕೆ ನಿರ್ಣಯದಂತೆ ಅಮರಶಿಲ್ಪಿ ಜಕಣಾಚಾರಿ ವೃತ್ತ ಎಂದು ನಾಮಕರಣ ಮಾಡಲಾಗುತ್ತಿದೆ. ಸಂಸದರಾದ ಶ್ರೇಯಸ್ ಎಂ. ಪಟೇಲ್ ನಾಮಫಲಕ ಅನಾವರಣ ಮಾಡುವರು ಎಂದರು.




ಇದಕ್ಕೆ ಸಹಕರಿಸಿದ ಸಂಸದರು, ಸ್ಥಳೀಯ ಶಾಸಕರಾದ ಹೆಚ್.ಪಿ.ಸ್ವರೂಪ್ ಪ್ರಕಾಶ್, ಮಾಜಿ ಶಾಸಕ ಪ್ರೀತಂ ಜೆ. ಗೌಡ, ಮಾಜಿ ಮಹಾಪೌರ ಎಂ. ಚಂದ್ರೇಗೌಡ ಮತ್ತು ಉದ್ದೂರು ಗ್ರಾಮಸ್ಥರಿಗೆ ಕೃತಜ್ಞತೆ ಸಲ್ಲಿಸಿದರು. ಕಾರ್ಯಕ್ರಮ ಸ್ಥಳಕ್ಕೆ ನಗರದ ಶ್ರೀ ಕ್ಷೇತ್ರ, ಕಾಳಿಕಾಂಬ ಕಮಟೇಶ್ವರ ದೇವಾಲಯದಿಂದ ತಾಲ್ಲೂಕು ವಿಶ್ವಕರ್ಮ ಯುವಕ ಸಂಘದ ನೇತೃತ್ವದಲ್ಲಿ ಬೈಕ್ ರ್‍ಯಾಲಿಯಲ್ಲಿ ಸಮಾಜ ಬಾಂಧವರು ತೆರಳಲಿದ್ದಾರೆ ಎಂದರು.

ಗುಜರಾತಿನ ಸರ್ದಾರ್ ವಲ್ಲಭಭಾಯ್ ಪಟೇಲ್ ಸ್ಮಾರಕ ಮಾದರಿ ಬೇಲೂರು-ಹಳೇಬೀಡಿಗೆ ಹೊಂದಿಕೊಂಡಂತೆ 10 ಎಕರೆ ಪ್ರದೇಶದಲ್ಲಿ ಅಮರಶಿಲ್ಪಿ ಜಕಣಾಚಾರಿ ಸ್ಮಾರಕ ತಾಣ ನಿರ್ಮಾಣ ಮಾಡಿ ಪ್ರವಾಸಿ ಕೇಂದ್ರವನ್ನಾಗಿ ಮಾಡಬೇಕು. ಅಮರಶಿಲ್ಪಿ ಜಕಣಾಚಾರಿ ಅವರ ಕೊಡುಗೆಗಳನ್ನು ಪಠ್ಯ ಪುಸ್ತಕಗಳಲ್ಲಿ ಅಧ್ಯಯನ ವಿಷಯವನ್ನಾಗಿಸಿ ಅವರ ಕೊಡುಗೆಗಳನ್ನು ಮುಂದಿನ ಪೀಳಿಗೆಗೆ ತಿಳಿಸುವಂತಾಗಬೇಕು.

ಮೇರು ಶಿಲ್ಪಿ ಅಮರಶಿಲ್ಪಿ ಜಕಣಾಚಾರಿ ಅವರ ಅವಿಸ್ಮರಣೀಯ ಕೊಡುಗೆಯಿಂದ ಪ್ರವಾಸೋದ್ಯಮದ ಅಭಿವೃದ್ಧಿಯಾಗುತ್ತಿದ್ದು, ವಿದೇಶಿ ವಿನಿಮಯದಿಂದ ಬರುವ ಆದಾಯದಲ್ಲಿ ಪ್ರವಾಸಿಗರಿಗೆ ಮೂಲಭೂತ ಸೌಲಭ್ಯ ಒದಗಿಸಿ ಪ್ರವಾಸೋದ್ಯಮಕ್ಕೆ ಸಂಬಂಧಿಸಿದಂತೆ ಪೂರಕ ವಾತಾವರಣ ನಿರ್ಮಾಣ ಮಾಡಬೇಕು ಎಂದು ಇದೇ ವೇಳೆ ಒತ್ತಾಯಿಸಿದರು.

ಅಮರಶಿಲ್ಪಿಯ ಹೆಸರಿನಲ್ಲಿ ಬೇಲೂರು ಮತ್ತು ಹಳೇಬೀಡು ಸಮೀಪ ಶಿಲ್ಪಕಲಾ ಕೇಂದ್ರ ತೆರೆಯಬೇಕು. ಪಿ.ಹೆಚ್. ಡಿ. ಪದವಿ ಪಡೆಯುವವರು ಶಿಲ್ಪಕಲೆಯನ್ನು ಅಧ್ಯಯನ ವಿಷಯವನ್ನಾಗಿ ಆರಿಸಿಕೊಂಡು ಶಿಲ್ಪಕಲೆಗೆ ಉತ್ತೇಜನ ದೊರೆಯುವಂತೆ ಮಾಡಬೇಕೆಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಅರಕಲಗೂಡು ತಾಲ್ಲೂಕು ಅರೇಮಾದನಹಳ್ಳಿಯ ವಿಶ್ವಕರ್ಮ ಪೀಠದ ಅನಂತಶ್ರೀ ವಿಭೂಷಿತ ಶಿವಸುಜ್ಞಾನ ತೀರ್ಥ ಮಹಾಸ್ವಾಮಿಗಳು ಮತ್ತು ಆದಿಚುಂಚನಗಿರಿ ಹಾಸನ ಶಾಖಾ ಮಠದ ಪರಮಪೂಜ್ಯ ಶ್ರೀ ಶಂಭುನಾಥಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸುವರು. ಹಾಸನ ಆಕಾಶವಾಣಿ ನಿವೃತ್ತ ಕಾರ್ಯಕ್ರಮ ಮುಖ್ಯಸ್ಥ ವಿಜಯ್ ಅಂಗಡಿಯವರು ಉಪನ್ಯಾಸ ನೀಡುವರು.

ಜಿಲ್ಲೆಯ ಎಲ್ಲ ಚುನಾಯಿತ ಪ್ರತಿನಿಧಿಗಳು ಮತ್ತು ಅಧಿಕಾರಿ ವರ್ಗದವರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಇದೇ ವೇಳೆ ಸಮಾಜದ ವಿವಿಧ ಕ್ಷೇತ್ರದ ಸಾಧಕರು ಮತ್ತು ಶಿಲ್ಪಿಗಳನ್ನು ಗೌರವಿಸಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಉಪಾಧ್ಯಕ್ಷ ಎ.ಸಿ.ನಾರಾಯಣ, ಪ್ರಧಾನ ಕಾರ್ಯದರ್ಶಿ ಕೆ.ರಾಘವೇಂದ್ರ ಕುಮಾರ್, ಮಾಜಿ ಅಧ್ಯಕ್ಷ ಜಿ. ಕುಮಾರ್ ಇದ್ದರು.

# ಹೊಸ ವರ್ಷಾಚರಣೆ: ಜಿಲ್ಲೆಯಲ್ಲಿ ಹೆಚ್ಚಿದ ಪೊಲೀಸ್ ಪಹರೆ

## ಚೆಕ್‌ಪೋಸ್ಟ್‌ಗಳಲ್ಲಿ ಬಿಗಿ ತಪಾಸಣೆ | ಪ್ರವಾಸಿ ತಾಣಗಳಲ್ಲಿ ಜನಜಂಗುಳಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನೂತನ ಕ್ಯಾಲೆಂಡರ್ ವರ್ಷದ ಆರಂಭಕ್ಕೆ ಜನರು ಸಜ್ಜಾಗಿದ್ದು ಪ್ರವಾಸಿ ತಾಣಗಳಲ್ಲಿ ಜನಜಂಗುಳಿ ಹೆಚ್ಚಾಗಿರುವುದು ಒಂದೆಡೆಯಾದರೆ ಮತ್ತೊಂದೆಡೆ ಹೋಂ ಸ್ಟೇ, ರೆಸಾರ್ಟ್‌ಗಳು ವಾರದ ಮೊದಲೇ ಬುಕ್ ಆಗಿವೆ.

ಕಳೆದ ವರ್ಷದ ಅನುಭವಗಳನ್ನು ನೆನಪಿಸಿಕೊಂಡು, ಮುಂದಿನ ದಿನಗಳತ್ತ ನಂಬಿಕೆ ಹಾಗೂ ಉತ್ಸಾಹದಿಂದ ಹೆಜ್ಜೆ ಇಡುವ ಈ ಸಂದರ್ಭದಲ್ಲಿ ಸಂಭ್ರಮ, ಸಂತೋಷ ಮತ್ತು ಸಮಾಧಾನದ ವಾತಾವರಣ ಎಲ್ಲೆಡೆ ಮನೆ ಮಾಡಿದೆ. ಹೊಸ ವರ್ಷಾರಂಭವು ಪ್ರತಿಯೊಬ್ಬರ ಮನಸ್ಸಿನಲ್ಲಿ ಉಲ್ಲಾಸವನ್ನು ತುಂಬಿ, ಉತ್ತಮ ಭವಿಷ್ಯದತ್ತ ಸಾಗಲು ಪ್ರೇರಣೆ ನೀಡುತ್ತದೆ.

ಆದರೆ, ಅದೇ ಸಂಭ್ರಮ ಕೆಲವು ಬಾರಿ ಸೂತಕವನ್ನು ಕರುಣಿಸುತ್ತದೆ. ಹೊಸ ವರ್ಷಾರಂಭದಲ್ಲೇ ಅನಾಹುತಗಳು ಸಂಭವಿಸುವ ಸಾಧ್ಯತೆ ಹೆಚ್ಚಿರುತ್ತದೆ. ಹೀಗಾಗಿ ಜಿಲ್ಲಾ ಪೊಲೀಸ್ ಇಲಾಖೆ ಕಠಿಣ ಕ್ರಮ ಕೈಗೊಂಡಿದ್ದು ಪ್ರವಾಸಿ ತಾಣಗಳಲ್ಲಿ ಹೆಚ್ಚಿನ ಬಿಗಿ ಭದ್ರತೆ ವಹಿಸಿದೆ. ನಗರ ಪ್ರದೇಶಗಳಲ್ಲಿ ಕಳೆದ ಒಂದು ವಾರದಿಂದ ಡ್ರಿಂಕ್ ಅಂಡ್ ಡ್ರೈವ್, ದ್ವಿಚಕ್ರ ವಾಹನ ಸವಾರರ ಹೆಲ್ಮೆಟ್ ತಪಾಸಣೆ ಚುರುಕಾಗಿ ನಡೆಯುತ್ತಿದೆ.

### ಚೆಕ್ ಪೋಸ್ಟ್‌ಗಳಲ್ಲಿ ಬಿಗಿ ಭದ್ರತೆ

ಮಲೆನಾಡು ಭಾಗವಾದ ಸಕಲೇಶಪುರ, ಆಲೂರು,



ಬೇಲೂರು ತಾಲ್ಲೂಕು ವ್ಯಾಪ್ತಿಯ ಹೋಂ ಸ್ಟೇ, ರೆಸಾರ್ಟ್‌ಗಳಿಗೆ ವರ್ಷಾರಂಭದ ಸಂಭ್ರಮಕ್ಕೆ ಬೆಂಗಳೂರು, ಮಂಗಳೂರು ಕಡೆಯಿಂದ ಜನರು ದಾಂಗುಡಿ ಇಡುತ್ತಿದ್ದಾರೆ. ಪಶ್ಚಿಮ ಘಟ್ಟದ ಸುಂದರ ವಾತಾವರಣ ಆಸ್ವಾದನೆಗೆ ಬರುತ್ತಿರುವವರ ಸಂಖ್ಯೆ ಹೆಚ್ಚಿದೆ. ಡಿ. 25 ರಿಂದ ಸರಣಿ ಸರ್ಕಾರಿ ರಜೆಗಳು ಇರುವುದರಿಂದ ಪ್ರವಾಸಿಗರ ಸಂಖ್ಯೆ ಹಿಂದೆಂದಿಗಿಂತ ಹೆಚ್ಚಾಗಿದೆ. ಆದ್ದರಿಂದ ಪೊಲೀಸ್ ಇಲಾಖೆ ಚೆಕ್ ಪೋಸ್ಟ್‌ಗಳಲ್ಲಿ ಭದ್ರತೆ ಹಾಗು ತಪಾಸಣೆ ಹೆಚ್ಚಿಸಿದೆ. ನಗರ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಪೊಲೀಸ್ ಗಸ್ತು ಹೆಚ್ಚಿಸಲಾಗಿದೆ. ರಾತ್ರಿ 12ರ ವರೆಗೆ ಪೊಲೀಸರು ಸಿಟಿ ರೌಂಡ್ ಹಾಕುತ್ತಿದ್ದು ಸಾರ್ವಜನಿಕರಲ್ಲಿ ಅರಿವು ಮೂಡಿಸುತ್ತಿದ್ದಾರೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೇರಿದಂತೆ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿ ರಾತ್ರಿ ಗಸ್ತು ಕೈಗೊಂಡಿದ್ದಾರೆ. ರಾತ್ರಿ 10ರ ಬಳಿಕ ಡಿಜೆ, ಆರ್ಕೆಸ್ಟ್ರಾ ಬಳಸದಂತೆ ರೆಸಾರ್ಟ್ ಹಾಗೂ ಹೋಂ ಸ್ಟೇ ಮಾಲೀಕರಿಗೆ ಈಗಾಗಲೇ ಸೂಚಿಸಲಾಗಿದೆ. ಈ ಸಂಬಂಧ ಸಭೆಗಳನ್ನು ನಡೆಸಲಾಗಿದೆ. ಪರಿಸರ ಸಂರಕ್ಷಣೆ ದೃಷ್ಟಿಯಿಂದ ಪ್ಲಾಸ್ಟಿಕ್ ಬಳಕೆ ನಿಷೇಧ, ಶಬ್ದ ಮಾಲಿನ್ಯ ತಡೆ ಮತ್ತು ಅರಣ್ಯ ಪ್ರದೇಶಗಳಲ್ಲಿ ಅತಿಕ್ರಮಣ ತಪ್ಪಿಸಲು ನಿರ್ದೇಶಕನ ನೀಡಲಾಗಿದೆ. ಮಲೆನಾಡು ಭಾಗದಲ್ಲಿರುವ ಹಸಿರು ಕಾಡು, ಬೆಟ್ಟಗುಡ್ಡ, ಜಲಪಾತ ಹಾಗೂ ತಂಪಾದ ಹವಾಮಾನ ಅರಸಿ ಜನರು ಬರುತ್ತಿದ್ದಾರೆ. ಯಗಚಿ ಜಲಾಶಯ, ಮಂಜರಾಬಾದ್ ಕೋಟೆ, ಬಿಸಿಲೆ ಘಾಟ್, ಕೆಂಪುಹೊಳೆ ಅರಣ್ಯ ಪ್ರದೇಶ, ಕಾಫಿ ತೋಟಗಳ ನಡುವೆ ನಿರ್ಮಿಸಿರುವ ರೆಸಾರ್ಟ್‌ಗಳು ಹಾಗೂ ಗ್ರಾಮೀಣ ವಾತಾವರಣ ನೀಡುವ ಹೋಂ ಸ್ಟೇಗಳು ಪ್ರವಾಸಿಗರಿಗೆ ವಿಶೇಷ ಆಕರ್ಷಣೆಯಾಗಿವೆ. ಹೊಸ ವರ್ಷದ ಹಿನ್ನಲೆಯಲ್ಲಿ ಬೆಂಗಳೂರು ಸೇರಿದಂತೆ ನಗರ ಪ್ರದೇಶಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಹಾಸನ ಜಿಲ್ಲೆಗೆ ಆಗಮಿಸುತ್ತಿದ್ದಾರೆ. ಈಗಾಗಲೇ ಹಲವು ರೆಸಾರ್ಟ್ ಹಾಗು ಹೋಂ ಸ್ಟೇಗಳಲ್ಲಿ ಬುಕ್ಕಿಂಗ್ ಬಹುತೇಕ ಭರ್ತಿಯಾಗಿದ್ದು, ಕೊನೆಯ ಕ್ಷಣದ ಬುಕ್ಕಿಂಗ್‌ಗಾಗಿ ಪ್ರವಾಸಿಗರು ಹರಸಾಹಸ ಪಡುತ್ತಿದ್ದಾರೆ. ಕುಟುಂಬ ಸಮೇತ ಬರುವವರು, ಯುವಕರ ತಂಡಗಳು ಹಾಗು ವಿದೇಶಿ ಪ್ರವಾಸಿಗರು ಕೂಡ ಹಾಸನ ಜಿಲ್ಲೆಯತ್ತ ಮುಖ ಮಾಡುತ್ತಿರುವುದು ಗಮನಾರ್ಹವಾಗಿದೆ.

### ಸ್ಥಳೀಯರಿಗೆ ಆರ್ಥಿಕ ಲಾಭ

ಪ್ರವಾಸಿಗರ ಆಗಮನದಿಂದ ಸ್ಥಳೀಯರಿಗೆ ಆರ್ಥಿಕ ಲಾಭವೂ ಹೆಚ್ಚುತ್ತಿದೆ. ಹೋಂ ಸ್ಟೇ ನಿರ್ವಾಹಕರು, ಟ್ಯಾಕ್ಸಿ ಚಾಲಕರು, ಸ್ಥಳೀಯ ಮಾರ್ಗದರ್ಶಕರು, ಹೋಟೆಲ್ ಮತ್ತು ಸಣ್ಣ ವ್ಯಾಪಾರಿಗಳಿಗೆ ಹೊಸ ವರ್ಷದ ದಿನಗಳಲ್ಲಿ ಉತ್ತಮ ಆದಾಯ ಸಿಗುವ ನಿರೀಕ್ಷೆಯಿದೆ. ಅದರಿಂದ ಗ್ರಾಮೀಣ ಆರ್ಥಿಕತೆಗೆ ಸಹ ಬಲ ಸಿಗುತ್ತಿದೆ.

ಒಟ್ಟಾರೆ, ಪ್ರಕೃತಿ ಸೌಂದರ್ಯ, ಐತಿಹಾಸಿಕ ತಾಣಗಳು ಮತ್ತು ಆತಿಥ್ಯ ಸಂಸ್ಕೃತಿಯೊಂದಿಗೆ ಹಾಸನ ಜಿಲ್ಲೆ ಹೊಸ ವರ್ಷಾಚರಣೆಗೆ ಪ್ರವಾಸಿಗರಿಗೆ ಆಕರ್ಷಕ ಸ್ಥಾನವಾಗಿ ಹೊರಹೊಮ್ಮಿದೆ.

# ಕುವೆಂಪು ಕ್ರಿಕೆಟರ್ಸ್ ತಂಡ ಚಾಂಪಿಯನ್




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ರಾಷ್ಟ್ರಕವಿ ಕುವೆಂಪು ಅವರ ಹುಟ್ಟುಹಬ್ಬದ ಅಂಗವಾಗಿ ಕುವೆಂಪು ಕ್ರಿಕೆಟರ್ಸ್ ವತಿಯಿಂದ ಏರ್ಪಡಿಸಿದ್ದ ಲೆಜೆಂಡ್ ಕಪ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ಪಟ್ಟಣದ ಕುವೆಂಪು ಕ್ರಿಕೆಟರ್ಸ್ ತಂಡವು ಚಾಂಪಿಯನ್ ಪಟ್ಟ ಅಲಂಕರಿಸಿತು. ಅರವಿಂದ್ ಕ್ರಿಕೆಟರ್ಸ್ ತಂಡವು ರನ್ನರ್‌ಅಪ್ ಪ್ರಶಸ್ತಿ ಪಡೆದುಕೊಂಡಿತು.

ಸಮಾರೋಪ ಸಮಾರಂಭದಲ್ಲಿ ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ. ಗೋಪಾಲಸ್ವಾಮಿ ಮಾತನಾಡಿ. ಕ್ರಿಕೆಟ್ ಬಗ್ಗೆ ಭಾರತದಲ್ಲಿ ಅತೀ ಹೆಚ್ಚು ಪ್ರೀತಿ ಇದ್ದು ಹುಚ್ಚು ಅಭಿಮಾನಿಗಳೂ ಸಹ ಇದ್ದಾರೆ. ಕ್ರೀಡೆ ಎಂಬುದು ಆಟಗಾರರ ಧೈರ್ಯ, ಶಕ್ತಿ ಹಾಗೂ ಸಾಮರ್ಥ್ಯವನ್ನು ತೋರಿಸುತ್ತದೆ. ಆದ್ದರಿಂದ ಕ್ರೀಡೆಗೆ ಮಕ್ಕಳನ್ನು ಹೆಚ್ಚು ಪಾಲ್ಗೊಳ್ಳುವಂತೆ ಪೋಷಕರು ನೋಡಿಕೊಳ್ಳಬೇಕು ಎಂದರು.

ನಗರ ಯೋಜನಾ ಪ್ರಾಧಿಕಾರದ ಮಾಜಿ ಅಧ್ಯಕ್ಷ ಅಣತಿ ಆನಂದ್, ಕಾಂಗ್ರೆಸ್ ಮುಖಂಡ ಉದಯಕುಮಾರ್, ಆರೋಗ್ಯ ರಕ್ಷಾ ಸಮಿತಿ ಸದಸ್ಯರಾದ ಕಲ್ಕೆರೆ ಮೋಹನ್ ಮತ್ತು ಜೆ.ಕೆ. ಮಂಜುನಾಥ್ ಉಪಸ್ಥಿತರಿದ್ದರು.

ಕುವೆಂಪು ಕ್ರಿಕೆಟರ್ಸ್ ಸಂಘದ ಅಪ್ಪಿ, ತಂಡದ ನಾಯಕ ಪ್ರವೀಣ್, ಅಮಿತ, ರವೀಂದ್ರ, ಸುಪ್ರೀತ್, ನವೀನ್ ಸೇರಿ ಇತರ ಆಟಗಾರರು ಮತ್ತು ಕ್ರೀಡಾಭಿಮಾನಿಗಳು ಭಾಗವಹಿಸಿದ್ದರು. ಅತಿಥಿಗಳು ವಿಜೇತ ಮತ್ತು ರನ್ನರ್ ಅಪ್ ತಂಡಗಳಿಗೆ ಬಹುಮಾನ ವಿತರಿಸಿ ಕ್ರೀಡಾಪಟುಗಳಿಗೆ ಶುಭಾಶಯ ಕೋರಿದರು.

# ಸಮಾವೇಶಗಳು ಆತ್ಮಾವಲೋಕನ ವೇದಿಕೆಯಾಗಲಿ: ಜೋಶಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಹಾಸನ: ಬ್ರಾಹ್ಮಣ ಸಮುದಾಯವು ಪ್ರಸ್ತುತ ಸಂಕಷ್ಟದ ಪರಿಸ್ಥಿತಿಯಲ್ಲಿದ್ದು, ಸಮಾವೇಶಗಳನ್ನು ಕೇವಲ ಸಂತಸಪಡುವ ಕೇಂದ್ರವಾಗಿಸದೆ ಆತ್ಮಾವಲೋಕನದ ವೇದಿಕೆಯನ್ನಾಗಿಸಬೇಕೆಂದು ಹೊರನಾಡು ಶ್ರೀ ಕ್ಷೇತ್ರದ ಧರ್ಮದರ್ಶಿ ಡಾ. ಭೀಮೇಶ್ವರ ಜೋಶಿ ಹೇಳಿದರು.

ನಗರದ ಮಲೆನಾಡು ತಾಂತ್ರಿಕ ಕಾಲೇಜು ಆವರಣದಲ್ಲಿ ಎರಡು ದಿನ ನಡೆದ ದ್ವಿತೀಯ ಜಿಲ್ಲಾ ಬ್ರಾಹ್ಮಣ ಸಮ್ಮೇಳನ ಹಾಗೂ ವಿಶ್ವ ಹಿತಚಿಂತಕರ ಸಮಾವೇಶ ಸಮಾರೋಪ ಸಮಾರಂಭದಲ್ಲಿ ಮಾತನಾಡಿ, ವಿಪ್ರ ಸಮಾಜದವರ ಏಳಿಗೆಯನ್ನು ಮತ್ತೊಬ್ಬ ವಿಪ್ರರೇ ಅಡ್ಡಗಾಲು ಹಾಕಿ ತಡೆಯುತ್ತಿರುವುದು ದುರದೃಷ್ಟಕರ. ನಮ್ಮವರು ಒಬ್ಬರು ಬೆಳೆಯುತ್ತಿದ್ದಾರೆ ಎಂದರೆ ಅವರಿಗೆ ಸಾಧ್ಯವಾದರೆ ಸಹಕಾರ ನೀಡಿ, ಇಲ್ಲವಾದರೆ ಮೌನವಾಗಿರಿ. ಆದರೆ ನಿಮ್ಮ ಅಸೂಯೆಯಿಂದ ಅಡ್ಡಗಾಲು ಹಾಕಬೇಡಿ, ಅದರಿಂದ ಇಡೀ ಸಮುದಾಯಕ್ಕೆ ತೊಂದರೆಯಾಗುತ್ತದೆ ಎಂದರು. ಪಾಶ್ಚಾತ್ಯ ಸಂಸ್ಕೃತಿಗೆ ಮಾರುಹೋಗುತ್ತಿರುವ ಇಂದಿನ ಪೀಳಿಗೆಗೆ ತಂದೆ-ತಾಯಿ ಸನಾತನ ಧರ್ಮಾಚರಣೆಯನ್ನು ಮನೆಯಲ್ಲೇ ಕಲಿಸಬೇಕೆಂದು ಕರೆ ನೀಡಿದರು.

ಬ್ರಾಹ್ಮಣ ಅಭಿವೃದ್ಧಿ ಮಂಡಳಿ ರಾಜ್ಯಾಧ್ಯಕ್ಷ ಅಸಗೋಡು ಜಯಸಿಂಹ ಮಾತನಾಡಿ, ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಪಂಚ ಗ್ಯಾರಂಟಿಗಳ ಮೂಲಕ ಬಡ ವಿಪ್ರರಿಗೂ ನೆರವಾಗುತ್ತಿದೆ. ಮುಖ್ಯಮಂತ್ರಿ ಹಾಗು ದಿನೇಶ್ ಗುಂಡೂರಾವ್ ಅವರು ಸಮಾಜದ ಯೋಜನೆಗಳಿಗೆ ಬೆಂಬಲ ನೀಡುತ್ತಿದ್ದಾರೆ ಎಂದರು.

ಮಲೆನಾಡು ತಾಂತ್ರಿಕ ಶಿಕ್ಷಣ ಸಮಿತಿ ಅಧ್ಯಕ್ಷ ಆರ್.ಟಿ.ದೇವೇಗೌಡ ಅವರು ಹಾರನಹಳ್ಳಿ ರಾಮಸ್ವಾಮಿ ಅವರ ಸೇವೆ ಸ್ಮರಿಸಿದರು.

ಜಿಲ್ಲಾ ಬ್ರಾಹ್ಮಣ ಸಭಾಧ್ಯಕ್ಷ ಹೆಚ್.ಎಸ್. ಮಂಜುನಾಥ್ ಮೂರ್ತಿ ಸಮ್ಮೇಳನದ ಯಶಸ್ಸಿಗೆ ಸಹಕರಿಸಿದ ಎಲ್ಲರಿಗೂ ವಂದಿಸಿದರು. ವೇದಿಕೆಯಲ್ಲಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ರಘುನಾಥ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ಭಾರತೀಯ ಸಂಸ್ಕಾರ ಹಾಗು ಸಂಸ್ಕೃತಿಯ ಉಳಿವಿಗೆ ಬ್ರಾಹ್ಮಣ ಸಮಾಜ ನೀಡಿದ ಕೊಡುಗೆ ಅಪಾರವಾಗಿದೆ. ಸಮ್ಮೇಳನದ ಪ್ರವೇಶ ದ್ವಾರಕ್ಕೆ ಆಧ್ಯಾತ್ಮ ಪ್ರಕಾಶರು ಎಂದು ಹೆಸರಿಟ್ಟಿರುವುದು ನನ್ನ ತವರು ಕ್ಷೇತ್ರ ಹೊಳೆನರಸೀಪುರದ ಅಧ್ಯಾತ್ಮ ಪ್ರಕಾಶ ಕಾರ್ಯಾಲಯವನ್ನು ನೆನಪಿಸಿ ಮನಸ್ಸಿಗೆ ಸಂತೋಷ ನೀಡಿದೆ. ಸಮುದಾಯದ ಯಾವುದೇ ಕಷ್ಟದ ಸಂದರ್ಭದಲ್ಲೂ ನಾನು ಸದಾ ನಿಮ್ಮ ಸಹಾಯಕ್ಕೆ ಇರುತ್ತೇನೆಂದು ಭರವಸೆ ನೀಡಿದರು.

# ಮಕ್ಕಳ ಆಸಕ್ತಿ ಅರಿತು ಪ್ರೋತ್ಸಾಹಿಸುವ ಕೆಲಸವಾಗಲಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಪೋಷಕರು ತಮ್ಮ ಮಕ್ಕಳ ಮನಸ್ಥಿತಿಯನ್ನು ಅರಿಯುವುದರ ಜೊತೆಗೆ ಅವರು ಯಾವ ಕ್ಷೇತ್ರಗಳಲ್ಲಿ ಆಸಕ್ತಿ ಹೊಂದಿದ್ದಾರೆ ಎಂಬುದನ್ನು ಅರಿತು ಸಹಕಾರ ನೀಡಿದರೆ ಪ್ರತಿಯೊಂದು ಮಗುವು ಜೀವನದಲ್ಲಿ ಸಾಧನೆ ಮಾಡಲು ಸಹಕಾರವಾಗಲಿದೆ ಪ್ರಗತಿಪರ ಕೃಷಿಕ ಹಾಗೂ 2025ರ ಕನ್ನಡ ರಾಜ್ಯೋತ್ಸವ ರಾಜ್ಯ ಪ್ರಶಸ್ತಿ ಪುರಸ್ಕೃತ ಡಾ.ಎಂ.ಸಿ. ರಂಗಸ್ವಾಮಿ ಅಭಿಪ್ರಾಯಪಟ್ಟರು.




ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಈಚೆಗೆ ವಿಜಯನಗರ ಬಡಾವಣೆಯಲ್ಲಿರುವ ಟೈಮ್ಸ್ ಅಂತಾರಾಷ್ಟ್ರೀಯ ಶಾಲೆಯ ವತಿಯಿಂದ ನಡೆದ ಟೈಮ್ಸ್ ಸಂಭ್ರಮ ಶಾಲಾ ವಾರ್ಷಿಕೋತ್ಸವ ಉದ್ಘಾಟಿಸಿ ಮಾತನಾಡಿ, ಪೋಷಕರ ಆಸೆ ಆಕಾಂಕ್ಷೆಗಾಗಿ ಮಕ್ಕಳ ಮೇಲೆ ಒತ್ತಡ ಹೇರುವ ಮೂಲಕ ಮಕ್ಕಳಲ್ಲಿನ ಆಸೆ ಆಕಾಂಕ್ಷೆಗಳನ್ನು ನಾವು ಕಡೆಗಣಿಸುತ್ತಿದ್ದೇವೆ. ಮಕ್ಕಳನ್ನು ಆರಂಭದಲ್ಲಿ ಉತ್ತಮ ಸಂಸ್ಕೃತಿಯನ್ನು ಕಲಿಸುವ ಮೂಲಕ ಅವರನ್ನು ಸಮಾಜದಲ್ಲಿ ಉತ್ತಮ ವ್ಯಕ್ತಿಗಳನ್ನಾಗಿ ಮಾಡಬೇಕು. ಆ ನಂತರ ಮಕ್ಕಳು ದೊಡ್ಡವರಾಗುತ್ತಾ ಅವರಲ್ಲಿ ಯಾವ ಕ್ಷೇತ್ರದ ಮೇಲೆ ಆಸಕ್ತಿ ಇರುತ್ತದೆಯೊ ಆ ಕ್ಷೇತ್ರದ ಕಡೆಗೆ ಅವರನ್ನು ಬೆಳೆಯಲು ಸಹಕಾರ ನೀಡುವ ಮೂಲಕ ಅವರನ್ನು ಬೆಂಬಲಿಸಬೇಕು. ಹಾಗಾದಾಗ ಮಾತ್ರ ಯಾವುದೇ ಒಬ್ಬ ಮಗು ಸಮಾಜದಲ್ಲಿ ಸಾಧನೆ ಮಾಡಲು ಸಾಧ್ಯವಾಗುತ್ತದೆ. ಆದರೇ ಸಮಾಜದಲ್ಲಿ ಇದು ಆಗದೆ ಇರುವುದರಿಂದ ಇಂದು ಅನೇಕ ಯುವಕರು ನಿರುದ್ಯೋಗಿಗಳಾಗಿ ಉಳಿಯುತ್ತಿದ್ದಾರೆ. ಇಂದು ಸಮಾಜದಲ್ಲಿ ಕೆಲಸ ಮಾಡಲು ಅನೇಕ ಅವಕಾಶಗಳಿದ್ದು, ಪ್ರತಿಯೊಬ್ಬರು ತಮಗೆ ದೊರೆಯುವ ಅವಕಾಶ ಸದ್ಬಳಕೆ ಮಾಡಿಕೊಳ್ಳಬೇಕು. ಯಾವುದೇ ಕ್ಷೇತ್ರವನ್ನು ಆಯ್ಕೆ ಮಾಡಿಕೊಂಡರು ಆ ಕ್ಷೇತ್ರದಲ್ಲಿ ಶ್ರದ್ಧೆ, ನಿಷ್ಠೆಯಿಂದ ಕೆಲಸ ಮಾಡಿದರೆ ಸಾಧನೆ ಮಾಡಲು ಸಾಧ್ಯ. ಯುವಕರು ಈ ದೇಶದ ಆಸಕ್ತಿ ಅವರನ್ನು ಸರಿದಾರಿಯಲ್ಲಿ ನಡೆಯುವಂತೆ ಮಾಡಬೇಕಾದ ಹೊಣೆಗಾರಿಕೆ ಪ್ರತಿಯೊಬ್ಬ ಹಿರಿಯರ ಮೇಲಿದೆ. ಶಾಲಾ ಹಂತದಲ್ಲಿ ಮಕ್ಕಳಿಗೆ ಮಾನವೀಯ ಗುಣಗಳನ್ನು ತಿಳಿಸಿಕೊಡುವ ಕೆಲಸ ಆಗಬೇಕಿದೆ. ಗುರು ಹಿರಿಯರನ್ನು ಮಕ್ಕಳು ಗೌರವದಿಂದ ಕಾಣುವ ಗುಣಗಳು, ದೇಶಕ್ಕಾಗಿ ದುಡಿಯುವ ಮನಸ್ಥಿತಿಯನ್ನು ಮಕ್ಕಳಲ್ಲಿ ಬೆಳೆಸಬೇಕಿದೆ ಎಂದು ಹೇಳಿದರು.

ಟೈಮ್ಸ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಬಿ.ಕೆ. ಗಂಗಾಧರ್ ಮಾತನಾಡಿ, ಸಮಾಜದಲ್ಲಿ ಸಾಧನೆ ಮಾಡಿ ಇತರರಿಗೆ ಮಾದರಿಯಾದ ವ್ಯಕ್ತಿಗಳನ್ನು ನಾವು ಸಮಾಜದ ಮುಖ್ಯ ವಾಹಿನಿಗೆ ಕರೆತರಬೇಕಾದ ಅವಶ್ಯಕತೆ ಇದೆ. ಜೀವನದ ಅನುಭವದಲ್ಲಿ ಕಷ್ಟಗಳನ್ನು ಎದುರಿಸಿ ಬದುಕು ಕಟ್ಟಿಕೊಂಡು ಇಂದು ಇತರರಿಗೆ ಮಾದರಿಯಾಗಿ ಬದುಕುವ ವ್ಯಕ್ತಿಗಳನ್ನು ಮಕ್ಕಳ ಮುಂದೆ ಕರೆತಂದು ಅವರಿಂದ ಮಕ್ಕಳಿಗೆ ಹಿತವಚನಗಳನ್ನು ತಿಳಿಸಿಕೊಡಬೇಕು. ಮಕ್ಕಳಿಗೆ ಇಂದು ಪಠ್ಯ ಬೋಧನೆಯಿಂದ ಏನನ್ನು ಕಲಿಸಲು ಸಾಧ್ಯವಿಲ್ಲ, ಹಾಗಾಗಿ ನಮ್ಮ ಶಾಲಾ ಹಂತದಲ್ಲಿ ಮಕ್ಕಳಿಗೆ ಗುರು ಹಿರಿಯರನ್ನು ಗೌರವಿಸುವಂತಹ ಕಾರ್ಯಕ್ರಮ, ಕೃಷಿ ಬದುಕು ಸೇರಿದಂತೆ ಸಾಮಾಜಮುಖಿಯಾಗಿ ಕಲಿಸಬಹುದಾದ ಎಲ್ಲಾ ಗುಣಗಳನ್ನು ಹೇಳಿಕೊಡಲಾಗುತ್ತಿದೆ. ಕೃಷಿ ಕ್ಷೇತ್ರವೆಂದರೆ ಇಂದು ಯಾರಿಗೂ ಬೇಡವಾದ ಕ್ಷೇತ್ರವಾಗಿದ್ದು, ಅಂತಹ ಕ್ಷೇತ್ರದಲ್ಲಿ ಸಾಧನೆ ಮಾಡಿ ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಸಾಧನೆ ಮಾಡಿದ ನಮ್ಮ ಜಿಲ್ಲೆಯ ಡಾ.ಎಂ.ಸಿ. ರಂಗಸ್ವಾಮಿ ಅವರು ಎಲ್ಲರಿಗೂ ಮಾದರಿಯಾಗಿದ್ದಾರೆ. ತಮ್ಮ ಕೃಷಿ ಕಾಯಕದ ಮೂಲಕ ಎಲ್ಲರನ್ನು ಸೆಳೆಯುವುತ್ತಿರುವುದು ನಿಜಕ್ಕೂ ಶ್ಲಾಘನೀಯವಾಗಿದೆ ಎಂದರು.

ಶಿವಮೊಗ್ಗ ಆಕ್ಸ ಫರ್ಡ್ ಶಾಲೆಯ ಅಧ್ಯಕ್ಷ ಶ್ರೀನಿವಾಸ್, ಕಾರ್ಯದರ್ಶಿ ಲೋಕೇಶ್, ಶಾಲೆಯ ಮುಖ್ಯ ಶಿಕ್ಷಕಿ ಬ್ಲೆಸ್ಸಿ ಶಾಮ್, ಸಂಯೋಜಕರಾದ ಕಾವ್ಯಶ್ರೀ, ನಳಿನಾಕ್ಷಿ, ಅರ್ಜುನ್ ಹಾಗೂ ಇತರರು ಹಾಜರಿದ್ದರು.

# ಜ. 6ರಂದು ನಮಗೂ ಬದುಕು ಕೊಡಿ ನಾಟಕ ಪ್ರದರ್ಶನ

ಹಾಸನ: ಚನ್ನರಾಯಪಟ್ಟಣದ ಪ್ರತಿಮಾ ಟ್ರಸ್ಟ್ ಹಾಗೂ ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಜ. 6ರ ಬೆಳಿಗ್ಗೆ 10 ಗಂಟೆಗೆ ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ನಮಗೂ ಬದುಕು ಕೊಡಿ ಎಂಬ ಪರಿಸರ ಸ್ನೇಹಿ ನಾಟಕ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ.

ತಣ್ಣೀರುಹಳ್ಳ ಮಠದ ಶ್ರೀ ವಿಜಯಕುಮಾರ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಸಮಾರಂಭ ಉದ್ಘಾಟಿಸಲಿದ್ದಾರೆ. ಶಾಸಕ ಸಿ.ಎನ್.ಬಾಲಕೃಷ್ಣ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್.ಪೂರ್ಣಿಮಾ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ಎನ್. ಬಲರಾಮ್, ರಂಗಕರ್ಮಿ ಪ್ರಸಾದ್ ರಕ್ಷಿದಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ತಾರಾನಾಥ್ ಭಾಗವಹಿಸುವರು.

ಪ್ರತಿಮಾ ಟ್ರಸ್ಟ್ ಅಧ್ಯಕ್ಷ ಉಮೇಶ್ ತೆಂಕನಹಳ್ಳಿ ಅಧ್ಯಕ್ಷತೆ ವಹಿಸಲಿದ್ದಾರೆ. ಈ ನಾಟಕವನ್ನು ಉಮೇಶ್ ತೆಂಕನಹಳ್ಳಿ ರಚಿಸಿ, ನಿರ್ದೇಶನ ಮಾಡಿದ್ದು, ಸರ್ಕಾರಿ ಹಿರಿಯ ಪ್ರಾಥಮಿಕ ಹಾಗು ಪ್ರೌಢ ಶಾಲೆಯ ವಿದ್ಯಾರ್ಥಿಗಳು ಅಭಿನಯಿಸುತ್ತಿದ್ದಾರೆ.

# ಇತಿಹಾಸದಲ್ಲಿ ಈ ದಿನ

## ಡಿಸೆಂಬರ್-31

1600: ಬ್ರಿಟಿಷ್ ಈಸ್ಟ್ ಇಂಡಿಯಾ ಕಂಪನಿಗೆ ಇಂಗ್ಲೆಂಡ್ ರಾಣಿ ಎಲಿಜಬೆತ್ 1ರಿಂದ ಅಧಿಕೃತ ಚಾರ್ಟರ್ ದೊರಕಿತು.

1879: ಅಮೇರಿಕಾದ ಮಹಾನ್ ವಿಜ್ಞಾನಿ ಥಾಮಸ್ ಆಲ್ವಾ ಎಡಿಸನ್ ಮೊದಲ ವಿದ್ಯುತ್ ದೀಪವನ್ನು ಸಾರ್ವಜನಿಕವಾಗಿ ಪ್ರದರ್ಶಿಸಿದರು.

1909: ಪ್ರಸಿದ್ಧ ಕಾದಂಬರಿಕಾರ ಅಂತಾರಾಷ್ಟ್ರೀಯ ಸಾಹಿತ್ಯ ಲೋಕದ ಮಹತ್ವದ ಬರಹಗಾರ ಹರ್ಮನ್ ಹೆಸೆ ಅವರಿಗೆ ಸಾಹಿತ್ಯದ ಕೊಡುಗೆಗಾಗಿ ಗುರುತ ಹೆಚ್ಚಾಯಿತು.

1947: ಸ್ವಾತಂತ್ರ್ಯಾನಂತರ ಭಾರತದಲ್ಲಿ ಹೊಸ ವರ್ಷದ ಸಂಭ್ರಮವನ್ನು ರಾಷ್ಟ್ರ ಮಟ್ಟದಲ್ಲಿ ಆಚರಿಸಲು ಆರಂಭವಾಯಿತು.

2020: ಕೊರೊನಾ ಮಹಾಮಾರಿ ನಡುವೆಯೂ ಜಗತ್ತು ಹೊಸ ವರ್ಷದ ನಿರೀಕ್ಷೆಯೊಂದಿಗೆ ಡಿಸೆಂಬರ್ 31ನ್ನು ಆಚರಿಸಿತು.

ಡಿಸೆಂಬರ್ 31: ಹಳೆಯ ವರ್ಷದ ಕೊನೆಯ ದಿನವಾಗಿದ್ದು, ಹೊಸ ವರ್ಷದ ನಿರೀಕ್ಷೆ, ಆತ್ಮಾವಲೋಕನ ಮತ್ತು ಹೊಸ ಸಂಕಲ್ಪಗಳ ದಿನವೆಂದು ಇತಿಹಾಸದಲ್ಲಿ ಮಹತ್ವ ಪಡೆದಿದೆ.

ಜನನ

1919: ಚಂದ್ರಶೇಖರ, ಭಾರತದ 8ನೇ ಪ್ರಧಾನಿ

1937: ಅನಿಲ್ ಕಪೂರ್, ಬಾಲಿವುಡ್ ಖ್ಯಾತ ನಟ

1965: ವಲ್ಸಲಾ ಮೆನನ್, ಮಲಯಾಳಂ ಚಿತ್ರನಟಿ

ಮರಣ

1920: ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಸಹೋದರ ವಿಠ್ಠಲ್‌ಭಾಯಿ ಪಟೇಲ್, ಸ್ವಾತಂತ್ರ್ಯ ಹೋರಾಟಗಾರ

1985: ರಿಕಿ ನೆಲ್ಸನ್, ಅಮೇರಿಕದ ಗಾಯಕ, ನಟ

2018: ರಾಜೇಶ್ ಖನ್ನಾ ಅವರ ಪತ್ನಿ ಡಿಂಪಲ್ ಕಪಾಡಿಯಾ ಅವರ ತಾಯಿ ಬೆಟ್ಟಿ

# ಕನ್ನಡ ಪ್ರೀತಿ ನಿತ್ಯೋತ್ಸವವಾಗಲಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಕನ್ನಡ ಭಾಷಾ ಪ್ರೇಮ ಕೇವಲ ನವೆಂಬರ್ ತಿಂಗಳ ರಾಜ್ಯೋತ್ಸವಕ್ಕೆ ಸೀಮಿತವಾಗದೆ ನಿತ್ಯೋತ್ಸವವಾಗಬೇಕು ಎಂದು ಕಾದಂಬರಿಕಾರ ನಾಗೇಶ್ ಕೌಂಡಿನ್ಯ ಪ್ರತಿಪಾದಿಸಿದರು.

ನಗರದ ಸಪ್ನ ಬುಕ್ ಹೌಸ್‌ನಲ್ಲಿ ಇತ್ತೀಚೆಗೆ ಏರ್ಪಡಿಸಿದ್ದ 70ನೇ ಕನ್ನಡ ರಾಜ್ಯೋತ್ಸವ ಹಾಗೂ 70 ಕೃತಿಗಳ ಲೋಕಾರ್ಪಣೆ ಸಮಾರಂಭ ಉದ್ಘಾಟಿಸಿ ಮಾತನಾಡಿ, ಕನ್ನಡದ ಹೆಸರಿನ ಕಾರ್ಯಕ್ರಮಗಳು ವರ್ಷಪೂರ್ತಿ ಜಾರಿಯಲ್ಲಿರಬೇಕು. ನಾವು ಪ್ರತಿ ಕ್ಷಣ ಗಾಳಿಯನ್ನು ಉಸಿರಾಡುವಂತೆ, ನಿತ್ಯ ಆಹಾರ ಸೇವಿಸುವಂತೆ, ಕನ್ನಡ ಪುಸ್ತಕವನ್ನುಓದುವ ಮೂಲಕ ಕನ್ನಡ ಭಾಷೆಯನ್ನು ಜೀವನದ ಅವಿಭಾಜ್ಯ ಅಂಗವಾಗಿಸಿಕೊಳ್ಳಬೇಕು. ದೊಡ್ಡ ಆಲದ ಮರದಲ್ಲಿ ಎಷ್ಟು ಕೊಂಬೆಗಳಿವೆಯೆಂದು ಊಹೆ ಮಾಡಲು ಸಾಧ್ಯವಿಲ್ಲ. ಹಾಗೆಯೇ ಸಪ್ನ ಬುಕ್ ಹೌಸ್ ಭಾರತದ ಅತ್ಯಂತ ದೊಡ್ಡ ಪುಸ್ತಕ ಮಾರಾಟ ಮಳಿಗೆಯಾಗಿದ್ದು, ಪುಸ್ತಕ ಉದ್ಯಮಕ್ಕೆ ಹೆಚ್ಚು ಪ್ರಾಮುಖ್ಯತೆ ಕೊಡುತ್ತಿದೆ ಎಂದರು.

ಸಪ್ನ ಬುಕ್ ಹೌಸ್ ಎಲ್ಲಾ ಭಾಷೆಯ ಬರಹಗಾರರಿಗೆ ಉತ್ತೇಜನ ಕೊಡುವುದಲ್ಲದೆ, ಹೊಸ ಪುಸ್ತಕಗಳನ್ನೂ ಹೊರ ತರುತ್ತಿದೆ. ನಾನೂ ಹಲವಾರು ಬರಹಗಾರರಿಗೆ ಮುನ್ನುಡಿ ಬರೆದು ಕೊಟ್ಟಿದ್ದೇನೆ. ಸಪ್ನ ಬುಕ್‌ಹೌಸ್ ಪುಸ್ತಕ ಲೋಕಾರ್ಪಣೆ ಮಾಡುತ್ತಿರುವುದು ಹೆಮ್ಮೆಯ ವಿಷಯ ಎಂದರು.

ಮದುವೆ, ಗೃಹ ಪ್ರವೇಶ, ನಾಮಕರಣ ಹೀಗೆ ಎಲ್ಲಿಗೆ ಹೋದರೂ ನಾನು ಉಡುಗೊರೆಯಾಗಿ ಪುಸ್ತಕ ನೀಡಿ ಪೂರ್ತಿ ಪುಸ್ತಕ ಓದಲು ಸಾಧ್ಯವಾಗದಿದ್ದರೂ ಕನಿಷ್ಟ 5 ಪುಟ ಓದಲು ಸಲಹೆ ನೀಡುತ್ತೇನೆ. ಪುಸ್ತಕ ನೀಡಿದರೆ ಓದುವ ಅಭಿರುಚಿ ಬೆಳೆಯುವುದರ ಜೊತೆಗೆ ಸಂಸ್ಥೆ ಬೆಳೆದ ಹಾಗೆ ಪುಸ್ತಕ ಉದ್ಯಮವೂ ಬೆಳೆಯುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಗೌರವ ಕಾರ್ಯದರ್ಶಿ ಬಿ.ಆರ್.ಬೊಮ್ಮೇಗೌಡ ಮಾತನಾಡಿ, 70ನೇ ಕನ್ನಡ ರಾಜ್ಯೋತ್ಸವದಂದು 70 ಕೃತಿ ಲೋಕಾರ್ಪಣೆ ಮಾಡುತ್ತಿರುವ ಸಪ್ನ ಬುಕ್ ಹೌಸ್ ಹೊಸ ಸಂಪ್ರದಾಯಕ್ಕೆ ನಾಂದಿ ಹಾಡಿದೆ ಎಂದರು.

ಸಾಹಿತಿಗಳಾದ ಎ.ಎಲ್. ಚನ್ನೇಗೌಡ, ಹೊನ್ನಶೆಟ್ಟಿಹಳ್ಳಿ ಗಿರಿರಾಜ್, ಶೈಲಜಾ ಹಾಸನ್, ಕೌಶಿಕ್ ಕೂಡುರಸ್ತೆ ಮಾತನಾಡಿದರು.

ಸಪ್ನ ಬುಕ್ ಹೌಸ್‌ನ ಶಾಖಾ ವ್ಯವಸ್ಥಾಪಕಿ ಬಿ.ಎಸ್.ಶಾಂತಲಾ ಸ್ವಾಗತಿಸಿದರು. ಶ್ರೀರಕ್ಷಾ ನಿರೂಪಿಸಿದರು.

# ರಸ್ತೆ ಸುರಕ್ಷತೆಗೆ ಗಮನ ಹರಿಸಲು ಜಿಲ್ಲಾಧಿಕಾರಿ ಸೂಚನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲೆಯಲ್ಲಿರುವ ಎಲ್ಲಾ ರಸ್ತೆಗಳನ್ನು ಸಂರಕ್ಷಣೆ ಮಾಡುವ ಸಂಬಂಧ ರಸ್ತೆ ಒತ್ತುವರಿಯನ್ನು ಗುರುತಿಸುವಂತೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.




ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಅಗತ್ಯವಿರುವ ಕಡೆಗಳಲ್ಲಿ ಉಬ್ಬು ನಿರ್ಮಾಣಕ್ಕೆ ಕ್ರಮ ವಹಿಸುವಂತೆ ಜೊತೆಗೆ ಒತ್ತುವರಿ ತೆರವುಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

ರಸ್ತೆ ಬದಿಯಲ್ಲಿ ಕಸ ವಿಲೇವಾರಿ ಮಾಡುವುದನ್ನು ತೆರವಿಗಾಗಿ ಅಭಿಯಾನದ ಮೂಲಕ ಕ್ರಮ ವಹಿಸಬೇಕು. ಪಾದಚಾರಿ ಸಂಚಾರಕ್ಕೆ ಮೀಸಲಿಟ್ಟಿರುವ ಸ್ಥಳದಲ್ಲಿ ವ್ಯಾಪಾರ ನಡೆಸುತ್ತಿದ್ದಾರೆ. ಇದರಿಂದ ಪಾದಾಚಾರಿಗಳು ಓಡಾಡಲು ಸ್ಥಳವಿಲ್ಲದೆ ರಸ್ತೆಯಲ್ಲಿ ಸಂಚಾರ ಮಾಡುತ್ತಿರುವುದರಿಂದ ಹಿಟ್ ಅಂಡ್ ರನ್ ಪ್ರಕರಣಕ್ಕೆ ಕಾರಣವಾಗುತ್ತದೆ. ಈ ನಿಟ್ಟಿನಲ್ಲಿ ಪಾದಚಾರಿಗಳು ಓಡಾಡಲು ಇರುವ ಸ್ಥಳದಲ್ಲಿ ವ್ಯಾಪಾರ ನಡೆಸುತ್ತಿರುವುದನ್ನು ತೆರವುಗೊಳಿಸಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಸಿಸಿಟಿವಿ ಅಳವಡಿಸಿದರೆ ಕಸ ಬಿಸಾಕುವುದನ್ನು ಪತ್ತೆ ಹಚ್ಚಲು ಹಾಗೂ ಬೀದಿ ನಾಯಿಗಳ ಹಾವಳಿಯಿಂದ ಸಂಭವಿಸುವ ಅವಘಡಗಳ ತಡೆಗೆ ಕ್ರಮ ವಹಿಸಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

ರಿಫ್ಲೆಕ್ಟರ್, ಕ್ಯಾಟ್‌ಐಸ್ ಅಳವಡಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುವಂತೆ ತಿಳಿಸಿದರಲ್ಲದೆ, ರಸ್ತೆ ಸುರಕ್ಷತೆಗಾಗಿ ಅಭಿಯಾನದ ಮೂಲಕ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಸ್ಥಳೀಯ ಸಂಸ್ಥೆಗಳು ಬೀದಿ ನಾಯಿಗಳ ಹಾವಳಿ ತಪ್ಪಿಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬೇಲೂರಿನಲ್ಲಿ ಟ್ರಾಫಿಕ್ ಲೈಟ್ ಅಳವಡಿಸಲು ಕ್ರಮ ಕೈಗೊಳ್ಳಲು ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ರುದ್ರಮುನಿ ಅವರಿಗೆ ತಿಳಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್.ಪೂರ್ಣಿಮಾ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಗಿರೀಶ್, ಪ್ರಾದೇಶಿಕ ಸಾರಿಗೆ ಅಧಿಕಾರಿ ಪ್ರಕಾಶ್, ಎನ್‌ಹೆಚ್‌ಎಐ ಯೋಜನಾ ನಿರ್ದೇಶಕ ಸೈಯದ್ ಮತ್ತಿತರ ಅಧಿಕಾರಿಗಳು ಹಾಜರಿದ್ದರು.

# ಅರ್ಜುನ ಸ್ಮಾರಕಕ್ಕಾಗಿ ಹೋರಾಡಿದವರಿಗೆ ಜಾಮೀನು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಅರ್ಜುನ ಆನೆಯ ಸ್ಮಾರಕ ನಿರ್ಮಾಣಕ್ಕಾಗಿ ಆಗ್ರಹಿಸಿದ್ದ 19 ಹೋರಾಟಗಾರರ ವಿರುದ್ಧ ದಾಖಲಾಗಿದ್ದ ಪ್ರಕರಣ ಸಂಬಂಧ ಇಲ್ಲಿನ ನ್ಯಾಯಾಲಯ ಜಾಮೀನು ಮಂಜೂರು ಮಾಡಿದೆ.

ಡಿ. 30ರಂದು ವಿಚಾರಣೆಗೆ ಹಾಜರಾಗುವಂತೆ ಜೆಎಂಎಫ್‌ಸಿ ನ್ಯಾಯಾಲಯ ಸಮನ್ಸ್ ಜಾರಿ ಮಾಡಿತ್ತು. 2023ರ ಡಿ. 4ರಂದು ಅರ್ಜುನ ಆನೆ ಯಸಳೂರು ವಲಯದ ದಬ್ಬಳಿಕಟ್ಟೆ ಬಳಿ ಕಾಡಾನೆ ಜೊತೆಗಿನ ಕಾದಾಟದಲ್ಲಿ ವೀರ ಮರಣವಪ್ಪಿತ್ತು. ಸಮಾಧಿ ಸ್ಥಳದಲ್ಲೇ ಸ್ಮಾರಕ ನಿರ್ಮಿಸಬೇಕೆಂದು ಆ ವೇಳೆ ಸ್ಥಳೀಯರು ಹೋರಾಟ ಮಾಡಿದ್ದರು.



ಸರಿಯಾಗಿ ಎರಡು ವರ್ಷಗಳ ಬಳಿಕ 19 ರೈತರು ಹಾಗು ಹೋರಾಟಗಾರರನ್ನು ಆರೋಪಿಗಳೆಂದು ಹೆಸರಿಸಿ ನ್ಯಾಯಾಲಯಕ್ಕೆ ಹಾಜರಾಗುವಂತೆ ನೋಟೀಸ್ ನೀಡಲಾಗಿತ್ತು. ಆದರೆ, ಘಟನೆ ನಡೆದ ಸಂದರ್ಭದಲ್ಲಿ ಯಾವ ನೋಟಿಸ್ ಅಥವಾ ಪೂರ್ವ ಮಾಹಿತಿ ನೀಡಿರಲಿಲ್ಲ. ಅಪರಾಧ ನಡೆದಿದೆ ಎನ್ನಲಾಗಿರುವ ಸಂದರ್ಭದಲ್ಲೇ ಕ್ರಮ ಕೈಗೊಳ್ಳದೆ, ಎರಡು ವರ್ಷ ಮೌನವಹಿಸಿ ಏಕಾಏಕಿ ಪ್ರಕರಣ ದಾಖಲಿಸಿರುವುದು ಅನ್ಯಾಯವೆಂದು ಹೋರಾಟಗಾರರು ಆಕ್ಷೇಪ ವ್ಯಕ್ತಪಡಿಸಿದ್ದರು. ಈ ಪ್ರಕರಣದ ವಿಚಾರವಾಗಿ ಸದನದಲ್ಲೂ ಶಾಸಕ ಸಿಮೆಂಟ್ ಮಂಜು ಪ್ರಸ್ತಾಪಿಸಿದ್ದರು. ಪ್ರಕರಣ ರದ್ದುಗೊಳಿಸುವಂತೆ ಹೋರಾಟಗಾರರು ಹೈಕೋರ್ಟ್ ಮೆಟ್ಟಿಲೇರಿದ್ದರು. ಈ ನಡುವೆ, ಸ್ಥಳೀಯ ನ್ಯಾಯಾಲಯದಿಂದ ಜಾಮೀನು ದೊರೆತಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248